# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 744 (916)**
**ಮಾನ್ಯ ಸದಸ್ಯರ ಹೆಸರು** : ಶ್ರೀಆರ್. ಧರ್ಮಸೇನಾ (ಸ್ಥಳೀಯಸಂಸ್ಥೆಗಳಕ್ಷೇತ್ರ)

**ಉತ್ತರಿಸಬೇಕಾದ ದಿನಾಂಕ** : 20.09.2021
**ಉತ್ತರಿಸಬೇಕಾದ ಸಚಿವರು** : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಪೀಠೋಕರಣಗಳು ಮತ್ತು ವೈದ್ಯಕೀಯ ಸಲಕರಣೆಗಳ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕಿದೆಯೇ ; | ಆಸ್ಪತ್ರೆಗಳ ಆಡಳಿತ ವೈದ್ಯಾಧಿಕಾರಿಗಳು ಕಾಲಕಾಲಕ್ಕೆ ಆಸ್ಪತ್ರೆಗಳಿಗೆ ಅಗತ್ಯವಿರುವ ಪೀಠೋಪಕರಣಗಳು ಹಾಗೂ ವೈದ್ಯಕೀಯ ಸಲಕರಣೆಗಳ ಕುರಿತು **Gap Analysis** ನಡೆಸಿ, ಅಗತ್ಯವಿರುವ ಪೀಠೋಪಕರಣಗಳು ಮತ್ತು ವೈದ್ಯಕೀಯ ಸಲಕರಣೆಗಳ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸುತ್ತಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಅಗತ್ಯಕ್ಕೆ ಅನುಗುಣವಾಗಿ ಚಾಲ್ತಿಯಲ್ಲಿರುವ ಸರ್ಕಾರಿ ಆದೇಶಗಳು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿನ ಪಾರದರ್ಶಕತೆ ಕಾಯ್ದೆ (KTPP Act), ಖರೀದಿ ನಿಯಮಗಳು ಹಾಗೂ ಅನ್ವಯವಾಗುವ ಮಾರ್ಗಸೂಚಿಗಳನ್ವಯ ಪೀಠೋಪಕರಣಗಳು ಮತ್ತು ವೈದ್ಯಕೀಯ ಸಲಕರಣೆಗಳನ್ನು ಖರೀದಿಸಿ ಸಂಬಂಧಿಸಿದ ಆಸ್ಪತ್ರೆಗಳಿಗೆ ಹಂತಹಂತವಾಗಿ ಪೂರೈಸಲಾಗುತ್ತಿದೆ.<br><br>ಇದಲ್ಲದೆ, ಸಾರ್ವಜನಿಕ ಆಸ್ಪತ್ರೆಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ ರಾಷ್ಟ್ರೀಯ ಆರೋಗ್ಯ ಅಭಿಯಾನ (NHM) ಹಾಗೂ ಇತರೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು /ಯೋಜನೆಗಳಡಿ ಅನುಮೋದನೆಗೊಂಡಿರುವ ವೈದ್ಯಕೀಯ ಸಲಕರಣೆಗಳು ಮತ್ತು ಉಪಕರಣಗಳನ್ನು ಸಹ ಸಂಬಂಧಿತ ಯೋಜನೆಗಳ ಅನುದಾನದಡಿ ಖರೀದಿಸಿ ಆಸ್ಪತ್ರೆಗಳಿಗೆ ಪೂರೈಸಲಾಗುತ್ತಿದೆ.<br><br>ಹೆಚ್ಚುವರಿಯಾಗಿ, ಆಸ್ಪತ್ರೆಗಳಿಗೆ ತುರ್ತಾಗಿ ಅಗತ್ಯವಿರುವ ಪೀಠೋಪಕರಣಗಳು ಮತ್ತು ವೈದ್ಯಕೀಯ ಸಲಕರಣೆಗಳನ್ನು ಆಸ್ಪತ್ರೆಗಳ ಆಡಳಿತ ವೈದ್ಯಾಧಿಕಾರಿಗಳು ಲಭ್ಯವಿರುವ ಆರೋಗ್ಯ ರಕ್ಷಾ ಸಮಿತಿ (ARS) ಅನುದಾನ ಅಥವಾ ಇತರೆ ಲಭ್ಯವಿರುವ ಸ್ಥಳೀಯ ಅನುದಾನಗಳಡಿ ಚಾಲ್ತಿಯಲ್ಲಿರುವ ಹಣಕಾಸು ಮತ್ತು ಖರೀದಿ ನಿಯಮಗಳನ್ನು ಅನುಸರಿಸಿ ಖರೀದಿಸುವ ಮೂಲಕ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ನಿರಂತರ ವೈದ್ಯಕೀಯ ಸೇವೆಗಳನ್ನು ಒದಗಿಸಲು ಅಗತ್ಯಕ್ರಮಗಳನ್ನು ಕೈಗೊಳ್ಳುತ್ತಿದೆ. |
| ಆ) | ಸರ್ಕಾರಿ ಆಸ್ಪತ್ರೆಗಳಲ್ಲಿ ಬೆಡ್‌ಗಳ ಕೊರತೆಯಿಂದ ಅನೇಕ ರೋಗಿಗಳು ಮತ್ತು ಹೆರಿಗೆಯಾದ ಬಾಣಂತಿಯರು ನೆಲದ ಮೇಲೆ ಮಲಗುವ ದಾರುಣ ಪರಿಸ್ಥಿತಿ ಇದ್ದರೂ ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸದಿರಲು ಕಾರಣವೇನು ; | ರಾಜ್ಯ ಸರ್ಕಾರವು ಆಸ್ಪತ್ರೆಗಳ ಮೂಲಸೌಕರ್ಯವನ್ನು ಬಲಪಡಿಸುವ ಉದ್ದೇಶದಿಂದ ಆಸ್ಪತ್ರೆಗಳ ಉನ್ನತೀಕರಣ, ಹೆಚ್ಚುವರಿ ಬೆಡ್‌ಗಳ ಮಂಜೂರು, ಕಟ್ಟಡ ವಿಸ್ತರಣೆ ಹಾಗೂ ಅಗತ್ಯ ವೈದ್ಯಕೀಯ ಉಪಕರಣಗಳ ಒದಗಿಸಲು ಕ್ರಮಗಳನ್ನು ಕೈಗೊಂಡಿರುತ್ತದೆ. ಹಾಸಿಗೆ ಬಳಕೆ ಪ್ರಮಾಣ ದರ (BOR) 80% ಗಿಂತ ಹೆಚ್ಚಾಗಿರುವ ಆಸ್ಪತ್ರೆಗಳಲ್ಲಿ ಅಗತ್ಯವಿರುವ ಹೆಚ್ಚುವರಿ ಬೆಡ್‌ಗಳನ್ನು ಒದಗಿಸಲಾಗುತ್ತಿದೆ. ಹಾಸಿಗೆ ಬಳಕೆ ಪ್ರಮಾಣ ದರ (BOR) 80% ಗಿಂತ ಹೆಚ್ಚಾಗಿರುವ ಆಸ್ಪತ್ರೆಗಳನ್ನು ಹೆಚ್ಚಿನ |

| | | |
|---|---|---|
| | | ಹಾಸಿಗೆಯ ಆಸ್ಪತ್ರೆಗಳನ್ನಾಗಿ ಹಂತಹಂತವಾಗಿ ಮೇಲ್ದರ್ಜೆಗೇರಿಸಲಾಗುತ್ತಿದೆ.<br><br>ಹೆರಿಗೆಗಳ ಪ್ರಮಾಣವು ಅಧಿಕವಾಗಿರುವ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಗರ್ಭಿಣಿಯರು, ಬಾಣಂತಿಯರು ಹಾಗೂ ನವಜಾತಶಿಶುಗಳಿಗೆ ಗುಣಮಟ್ಟದ ಮತ್ತು ನಿರಂತರ ಆರೋಗ್ಯ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಅಗತ್ಯತೆಗೆ ಅನುಗುಣವಾಗಿ ಪ್ರತ್ಯೇಕ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳನ್ನು (Mother and Child Hospital) ಸ್ಥಾಪಿಸಲಾಗುತ್ತಿದೆ. ಈ ಆಸ್ಪತ್ರೆಗಳಲ್ಲಿ ಅಗತ್ಯ ವೈದ್ಯಕೀಯ ತಜ್ಞರು, ಸಿಬ್ಬಂದಿ, ಪೀಠೋಪಕರಣಗಳು ಹಾಗೂ ವೈದ್ಯಕೀಯ ಉಪಕರಣಗಳನ್ನು ಒದಗಿಸುವ ಮೂಲಕ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ನೀಡಲು ಕ್ರಮಕೈಗೊಳ್ಳಲಾಗಿದೆ. |
| ಇ) | ಸರ್ಕಾರ ಈಗಲಾದರೂ ತ್ವರಿತಗತಿಯಲ್ಲಿ ಬೆಡ್ ಮುಂತಾದ ಪೀಠೋಪಕರಣಗಳು ಮತ್ತು ವೆಂಟಿಲೇಟರ್ ಮುಂತಾದ ವೈದ್ಯಕೀಯ ಸಲಕರಣೆಗಳನ್ನು ಒದಗಿಸಲು ಗಂಭೀರವಾಗಿ ಕೂಡಲೇ ಕ್ರಮಕೈಗೊಳ್ಳಲಾಗುವುದೇ ? | ಸಾರ್ವಜನಿಕ ಆಸ್ಪತ್ರೆಗಳಲ್ಲಿ ಹೊರರೋಗಿಗಳ (OPD) ಹಾಗೂ ಒಳರೋಗಿಗಳ (IPD) ಸಂಖ್ಯೆ, ಪ್ರಮುಖ ಶಸ್ತ್ರಚಿಕಿತ್ಸೆಗಳು (Major Surgeries), ಸಣ್ಣಶಸ್ತ್ರ ಚಿಕಿತ್ಸೆಗಳು (Minor Surgeries), ಹೆರಿಗೆಗಳ ಸಂಖ್ಯೆ, ಮಧ್ಯರಾತ್ರಿ ರೋಗಿಗಳ ಸಂಖ್ಯೆ (Midnight Head Count) ಹಾಗೂ ಹಾಸಿಗೆ ಬಳಕೆ ಪ್ರಮಾಣ (Bed Occupancy Rate - BOR) ಸೇರಿದಂತೆ ವಿವಿಧ ಸೇವಾ ಸೂಚಕಗಳನ್ನು ಕಾಲಕಾಲಕ್ಕೆ ಪರಿಶೀಲಿಸಲಾಗುತ್ತಿದೆ. ಈ ಮಾನದಂಡಗಳ ಆಧಾರದ ಮೇಲೆ, ವಿಶೇಷವಾಗಿ ಹಾಸಿಗೆ ಬಳಕೆ ಪ್ರಮಾಣ (BOR) ಶೇ.80 ಕ್ಕಿಂತ ಹೆಚ್ಚಾಗಿರುವ ಸಾರ್ವಜನಿಕ ಆಸ್ಪತ್ರೆಗಳನ್ನು ಅಗತ್ಯತೆ, ಅನುದಾನದ ಲಭ್ಯತೆ ಹಾಗೂ ಸರ್ಕಾರದ ಅನುಮೋದನೆಗೆ ಒಳಪಟ್ಟು ಹೆಚ್ಚಿನ ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗಳನ್ನಾಗಿ ಹಂತಹಂತವಾಗಿ ಮೇಲ್ದರ್ಜೆಗೇರಿಸಲಾಗುತ್ತಿದೆ.<br><br>ಪ್ರಸ್ತುತ ಆಸ್ಪತ್ರೆಗಳಲ್ಲಿ ಒದಗಿಸುತ್ತಿರುವ ಸೇವೆಗಳು ಹಾಗೂ ಲಭ್ಯವಿರುವ ಮೂಲ ಸೌಕರ್ಯವನ್ನು ಪರಿಗಣಿಸಿ, ಸದರಿ ಆಸ್ಪತ್ರೆಗಳಿಗೆ ಅಗತ್ಯವಿರುವ ಪೀಠೋಪಕರಣಗಳು ಮತ್ತು ವೆಂಟಿಲೇಟರ್ ಮುಂತಾದ ವೈದ್ಯಕೀಯ ಸಲಕರಣೆಗಳನ್ನು ಚಾಲ್ತಿಯಲ್ಲಿರುವ ಹಣಕಾಸು ಮತ್ತು ಖರೀದಿ ನಿಯಮಗಳನ್ನು ಅನುಸರಿಸಿ ಖರೀದಿಸುವ ಮೂಲಕ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ನಿರಂತರ ವೈದ್ಯಕೀಯ ಸೇವೆಗಳನ್ನು ಒದಗಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ**: ಆಕುಕ 54 ಎಸ್‌ಟಿಕ್ಯೂ 2021

( ಯು.ಟಿ.ಖಾದರ್ ಫರೀದ್ )
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು